# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 573
2. ಸದಸ್ಯರ ಹೆಸರು : ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 14/08/2025
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಯಾವ ಯಾವ ಇಲಾಖೆಗಳಿಂದ ಖಾಲಿಯಿರುವ ಕೆ.ಎ.ಎಸ್. ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆ; (ವಿವರ ನೀಡುವುದು) | ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೆನೆನೆ 2024, ದಿನಾಂಕ: 25.11.2024ರನ್ವಯ ರಾಜ್ಯದ ಒಳ ಮೀಸಲಾತಿ ಕುರಿತು ಅಂತಿಮ ನಿರ್ಧರಣೆ ತೆಗೆದುಕೊಳ್ಳುವವರೆಗೆ ನೇರ ನೇಮಕಾತಿ ಮೂಲಕ ಹುದ್ದೆಗಳನ್ನು ಭರ್ತಿ ಮಾಡುವುದಕ್ಕೆ ನಿರ್ಬಂಧವನ್ನು ವಿಧಿಸಲಾಗಿರುತ್ತದೆ. |
| ಆ | ಎಷ್ಟು ಕೆ.ಎ.ಎಸ್. ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಗಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಪ್ರಸ್ತಾವನೆಯು ಸಲ್ಲಿಕೆಯಾಗಿವೆ; | ಈ ಹಿನ್ನೆಲೆಯಲ್ಲಿ ಕೆ.ಎ.ಎಸ್., ಮತ್ತು ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಗಾಗಿ 2024-25 ಹಾಗೂ ಪ್ರಸಕ್ತ ವರ್ಷ ಯಾವುದೇ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಸ್ವೀಕೃತವಾಗಿರುವುದಿಲ್ಲ. |
| ಇ | ಅವುಗಳಲ್ಲಿ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಯು ಅನುಮೋದನೆ ನೀಡಿದೆ? (ಇಲಾಖಾವಾರು ಮಾಹಿತಿಯನ್ನು ಒದಗಿಸುವುದು) | ಈ ಹಿಂದೆ ರಾಜ್ಯದಲ್ಲಿ ಕೆ.ಎ.ಎಸ್., ಮತ್ತು ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಗಾಗಿ ವಿವಿಧ ಇಲಾಖೆಗಳಿಂದ ಬಂದಿದ್ದ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಆರ್ಥಿಕ ಇಲಾಖೆಯು ಹಂತ ಹಂತವಾಗಿ ನೇಮಕಾತಿ ಮಾಡಿಕೊಳ್ಳಲು ಸಹಮತಿ ನೀಡಿರುವ ಹುದ್ದೆಗಳ ವಿವರವನ್ನು ಅನುಬಂಧ-1 ರಲ್ಲಿ ನೀಡಲಾಗಿದೆ. |

**ಸಂಖ್ಯೆ: ಆಇ 101 ಬಿಜಿಎಲ್ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ

# ಅನುಬಂಧ-1

2023-24 ನೇ ಸಾಲಿನಲ್ಲಿ ಕೆ.ಎ.ಎಸ್., ಮತ್ತು ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಭರ್ತಿ ಸಹಮತಿ ನೀಡಿದ್ದ ವಿವರ

| ಕ್ರ. ಸಂ. | ಇಲಾಖೆ | ಆರ್ಥಿಕ ಇಲಾಖೆಯು ಭರ್ತಿ ಮಾಡಿಕೊಳ್ಳಲು ಸಹಮತಿಸಿದ ಹುದ್ದೆಗಳ ಸಂಖ್ಯೆ |
|---|---|---|
| 1 | ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 85 |
| 2 | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | 55 |
| 3 | ಕಂದಾಯ ಇಲಾಖೆ | 76 |
| 4 | ಪೊಲೀಸ್ ಇಲಾಖೆ | 10 |
| 5 | ಕಾರಾಗೃಹ ಇಲಾಖೆ | 03 |
| 6 | ವಾಣಿಜ್ಯ ತೆರಿಗೆಗಳ ಇಲಾಖೆ | 140 |
| 7 | ಖಜಾನೆ ಇಲಾಖೆ | 48 |
| 8 | ಅಬಕಾರಿ ಇಲಾಖೆ | 10 |
| 9 | ಸಹಕಾರ ಇಲಾಖೆ | 21 |
| 10 | ಸಮಾಜ ಕಲ್ಯಾಣ ಇಲಾಖೆ | 27 |
| 11 | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | 07 |
| 12 | ಕಾರ್ಮಿಕ ಇಲಾಖೆ | 04 |
| 13 | ಕೌಶಲ್ಯಾಭಿವೃದ್ಧಿ ಇಲಾಖೆ | 03 |
| 14 | ಪ್ರವಾಸೋದ್ಯಮ ಇಲಾಖೆ | 02 |
| 15 | ಆಹಾರ ಮತ್ತು ನಾಗರೀಕ ಸರಬರಾಜು | 09 |
| 16 | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | 04 |
| | ಒಟ್ಟು | 504 |